# All India Radio: Bangalore
# Regional Bulletin In Kannada
# 12.06.2026 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
2. ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಸಂದರ್ಭದಲ್ಲಿಂದು ರಾಜ್ಯದ ವಿವಿಧೆಡೆ ಜನ ಜಾಗೃತಿ ಕಾರ್ಯಕ್ರಮ
3. ನಿಮ್ಹಾನ್ಸ್ ಸಹಯೋಗದಲ್ಲಿ ನರ ಶಸ್ತ್ರ ಚಿಕಿತ್ಸೆಗಾಗಿ ಆಧುನಿಕ ರೊಬೋಟ್ ಅಭಿವೃದ್ಧಿ - ಸಚಿವ ಪ್ರಿಯಾಂಕ್ ಖರ್ಗೆ
4. ಶಿವಮೊಗ್ಗ ಕಾರಾಗೃಹದ ಸಜಾ ಬಂಧಿಗಳಿಂದ ಸ್ವಚ್ಛತಾ ಗೀತೆ : ಪಾಲಿಕೆಯ ಕಸ ತುಂಬುವ ವಾಹನಗಳಲ್ಲಿ ಬಿತ್ತರ

<><><><>

ದೆಹಲಿ ಭೇಟಿಯಲ್ಲಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಷ್ಟ್ರಪತಿ ಭವನದಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು. ಸೌಜನ್ಯದ ಈ ಭೇಟಿ ಸಂದರ್ಭದಲ್ಲಿ ಸಮಾಲೋಚನೆ ನಡೆಸಿದರು. ಮುಖ್ಯಮಂತ್ರಿಯವರು ಉಪರಾಷ್ಟ್ರಪತಿ ಭವನಕ್ಕೆ ತೆರಳಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಭೇಟಿ ಮಾಡಿ, ಹಾರ್ದಿಕ ಮಾತುಕತೆ ನಡೆಸಿದರು.

<><><><>

ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಸಂದರ್ಭದಲ್ಲಿ ಇಂದು ಜನರಲ್ಲಿ ಜಾಗೃತಿ ಮೂಡಿಸುವ ಕುರಿತಂತೆ ರಾಜ್ಯಾದ್ಯಂತ ವಿವಿಧ ಕಾರ್ಯಕ್ರಮ ನಡೆದಿವೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರತಿಯೊಂದು ಮಗುವಿಗೂ ಕಲಿಕೆಯ ಅವಕಾಶ ದೊರೆಯಬೇಕು. ಮಕ್ಕಳು ಆಟವಾಡುತ್ತಾ ಸುರಕ್ಷಿತ ಹಾಗೂ ಪೋಷಣಾಯುಕ್ತ ಪರಿಸರದಲ್ಲಿ ಬೆಳೆಯಬೇಕು ಎಂಬುದನ್ನು ಈ ದಿನ ನಮಗೆ ನೆನಪಿಸುತ್ತದೆ ಎಂದು ಈ ಸಂದರ್ಭದಲ್ಲಿ ನೀಡಿದ ಸಂದೇಶದಲ್ಲಿ ತಿಳಿಸಿದ್ದಾರೆ. ಸ್ವ-ಸಾಮರ್ಥ್ಯವನ್ನು ಅರಿತುಕೊಳ್ಳುವಂತಹ ಶಿಕ್ಷಣದ ಲಭ್ಯತೆ, ಸಾಮಾಜಿಕ ಭದ್ರತೆ ಹಾಗೂ ಸಮಾನ ಅವಕಾಶಗಳ ಮೂಲಕ ಸೂಕ್ತ ಪರಿಸರ ಕಲ್ಪಿಸಲು ಸರ್ಕಾರ ಬದ್ಧವಾಗಿದೆ. ಪ್ರತಿ ಮಗು ತನ್ನ ಬಾಲ್ಯವನ್ನು ಆನಂದಿಸುವಂತೆ ಖಾತರಿ ಪಡಿಸಲು ಎಲ್ಲರೂ ಶ್ರಮಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ. ಬಾಲ ಕಾರ್ಮಿಕ ಪದ್ಧತಿ ಹೋಗಲಾಡಿಸುವ ಕುರಿತು ಬಳ್ಳಾರಿ ನಗರದಲ್ಲಿಂದು ಜಿಲ್ಲಾಡಳಿತ, ಕಾರ್ಮಿಕ ಇಲಾಖೆಯಿಂದ ಜಾಗೃತಿ ಮೂಡಿಸುವ ಜಾಥಾ ನಡೆಯಿತು. ಜಿಲ್ಲಾ ನ್ಯಾಯಾಧೀಶ ಸಿದ್ದಲಿಂಗ ಪ್ರಭು ಜಾಥಾಗೆ ಚಾಲನೆ ನೀಡಿ, ಹೆಣ್ಣಾಗಿರಲಿ, ಗಂಡಾಗಿರಲಿ ಪ್ರತಿಯೊಬ್ಬ ಮಗು ವಿದ್ಯಾಭ್ಯಾಸ ಪಡೆಯುವ ಹಕ್ಕು ಹೊಂದಿದೆ. ಅದನ್ನು ಮೊಟಕುಗೊಳಿಸಬಾರದು ಎಂದರು.

ಧ್ವನಿ : ಸಿದ್ದಲಿಂಗ ಪ್ರಭು ಜಿಲ್ಲಾ ನ್ಯಾಯಾಧೀಶ

ಬಾಲ ಕಾರ್ಮಿಕಯೋಜನೆಗಳ ನಿರ್ದೇಶಕ ಮೌನೇಶ್, ಬಳ್ಳಾರಿ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ ೮೬೫ ಕಡೆ ತಪಾಸಣೆ ಮಾಡಿ ದುಡಿಸಿಕೊಳ್ಳುತ್ತಿದ್ದ ೧೮ ವರ್ಷದೊಳಗಿನ ೫೮ ಮಕ್ಕಳನ್ನು ರಕ್ಷಿಸಲಾಗಿದೆ. ಅವರನ್ನು ಮುಖ್ಯವಾಹಿನಿಗೆ ತರಲು ಮಕ್ಕಳ ಹಕ್ಕುಗಳ ರಕ್ಷಣಾ ಸಮಿತಿಗೆ ಒಪ್ಪಿಸಿದೆ. ಸಮಿತಿಯು ಮಕ್ಕಳನ್ನು ದುಡಿಸಿಕೊಂಡ ಮಾಲೀಕರಿಂದ ೨೦ ಸಾವಿರ ರೂಪಾಯಿ ದಂಡ ಮತ್ತು ಸರ್ಕಾರದ ೧೫ ಸಾವಿರ ರೂಪಾಯಿ ಸೇರಿಸಿ ಜಿಲ್ಲಾಧಿಕಾರಿ ಮತ್ತು ೩೧ ಮಕ್ಕಳ ಹೆಸರಲ್ಲಿ ಇಡುಗಂಟು ಇಟ್ಟಿದೆ. ಅದನ್ನು ಮಕ್ಕಳಿಗೆ ೧೮ ವರ್ಷ ತುಂಬಿದ ನಂತರ ಶಿಕ್ಷಣದ ಅನುಕೂಲಕ್ಕೆ ಅವರ ಪಾಲಕ ಪೋಷಕರಿಗೆ ನೀಡಲಿದೆ ಎಂದರು. ಶಾಲಾ ಮಕ್ಕಳು, ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು, ಅಧಿಕಾರಿಗಳಿಂದ ಕೂಡಿದ ಜಾಥಾದಲ್ಲಿ ಮಕ್ಕಳಿಗೆ ಶಿಕ್ಷಣ ನೀಡಿ

ದುಡಿಮೆಯಿಂದ ಮುಕ್ತಿಗೊಳಿಸಿ, ಎನ್ನುವ ಬರಹಗಳ ಪ್ಲೇ ಕಾರ್ಡ್ ಹಿಡಿದು ಜಾಥಾ ನಗರದ ಪ್ರಮುಖ ರಸ್ತೆಗಳಲ್ಲಿ ಸಾಗಿತು. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಇಲಾಖೆ ಸಹಯೋಗದಲ್ಲಿ ದೊಡ್ಡಬಳ್ಳಾಪುರದ ಬಾಶೆಟ್ಟಿಹಳ್ಳಿಯಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ ಅಂಗವಾಗಿ ಜಾಗೃತಿ ಜಾಥಾ ನಡೆಸಲಾಯಿತು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀಶೈಲ ಭೀಮಸೇನ ಬಾಗಡಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪ್ರತಿಯೊಬ್ಬ ಪೋಷಕರು ತಮ್ಮ ಮಕ್ಕಳನ್ನು ದುಡಿಮೆಗೆ ಕಳುಹಿಸದೆ, ಉತ್ತಮ ಶಿಕ್ಷಣ ಪಡೆಯಲು ಕಳುಹಿಸಬೇಕು. ಕಾರ್ಖಾನೆಗಳು ಬಾಲ ಕಾರ್ಮಿಕ ರನ್ನು ನೇಮಿಸಿಕೊಂಡಿಲ್ಲ ಎಂದು ಕಡ್ಡಾಯ ವಾಗಿ ಫಲಕ ಹಾಕಿ, ಕಾರ್ಮಿಕ ಕಾನೂನುಗಳನ್ನು ಪಾಲಿಸಬೇಕಿದೆ ಎಂದು ತಿಳಿಸಿದರು. ಮಂಡ್ಯ ನಗರದ ಗಾಂಧಿಭವನದಲ್ಲಿ ನಡೆದ ಸಮಾರಂಭದಲ್ಲಿ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುಳಾ ಇಟ್ಟಿ ಮಾತನಾಡಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಸುರಕ್ಷಿತ ಬಾಲ್ಯವನ್ನು ಒದಗಿಸುವುದು ಸಮಾಜದ ಕರ್ತವ್ಯವಾಗಿದೆ ಎಂದರು. ಬಾಲ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಗೋಡೆ ಬರಹ, ಆಟೋ ಪ್ರಚಾರ ಹಾಗೂ ಜಾಥಾಗಳ ಮೂಲಕ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಹಾವೇರಿಯಲ್ಲಿಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡಿದ್ದ ಜಾಥಾಕ್ಕೆ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಆಗಿರುವ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಿರಾದಾರ ದೇವಿಂದ್ರಪ್ಪಾ ಎನ್. ಜಾಥಾಕ್ಕೆ ಚಾಲನೆ ನೀಡಿದರು. ಬಾಲಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಿ, ಪ್ರತಿಯೊಂದು ಮಗುವು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ದಾವಣಗೆರೆಯಲ್ಲಿಂದು 'ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ'ಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಎಸ್.ಪಿ.ಎಸ್. ನಗರದ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಜಾಗೃತಿ ಜಾಥಾಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ವೇಲಾ ಡಿ.ಕೆ. ಅವರು ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

<><><><>

ರಾಜ್ಯದಲ್ಲಿ ನರಶಸ್ತ್ರ ಚಿಕಿತ್ಸೆಗೆ ಅನುಕೂಲವಾಗುವ ಅತ್ಯಾಧುನಿಕ ರೊಬೋಟ್‌ವೊಂದನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಒಟ್ಟು ಮೂರು ವರ್ಷಗಳ ಅವಧಿಯಲ್ಲಿ ಸುಮಾರು ೩ ಕೋಟಿ ೬೬ ಲಕ್ಷ ರೂಪಾಯಿ ಬಂಡವಾಳ ಹೂಡಿಕೆಯೊಂದಿಗೆ ಮಾಹಿತಿ ತಂತ್ರಜ್ಞಾನ ಅಂತಾರಾಷ್ಟ್ರೀಯ ಸಂಸ್ಥೆ ಬೆಂಗಳೂರು ಹಾಗೂ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ-ನಿಮ್ಹಾನ್ಸ್ ಸಹಯೋಗದಲ್ಲಿ ದೇಶೀಯವಾಗಿ ಈ ಯೋಜನೆ ಜಾರಿಗೆ ಬರಲಿದೆ ಎಂದು ಅವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

<><><><>

ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕರಲ್ಲಿ ಕಸದ ವಿಲೇವಾರಿ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಶಿವಮೊಗ್ಗ ಕೇಂದ್ರ ಕಾರಾಗೃಹದ ೬ ಜನ ಸಜಾ ಬಂಧಿಗಳು ಸ್ವಚ್ಛತಾ ಜಾಗೃತಿ ಗೀತೆಗಳ ಗಾಯನದ ಧ್ವನಿಮುದ್ರಿಕೆ ಸಿದ್ಧಪಡಿಸಿದ್ದಾರೆ. ಈ ಹಾಡುಗಳು ಶಿವಮೊಗ್ಗ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸ ತುಂಬುವ ವಾಹನಗಳಲ್ಲಿ ಬಿತ್ತರಗೊಳ್ಳುತ್ತಿವೆ. ಬಂಧಿಗಳ ಮನಃಪರಿವರ್ತನ ಮತ್ತು ಸುಧಾರಣಾ ಕಾರ್ಯಕ್ರಮಗಳಲ್ಲಿ ಈ ರೀತಿಯ ವಿಭಿನ್ನ ಹಾಗೂ ವಿನೂತನ ಕಾರ್ಯಕ್ರಮ ರಾಜ್ಯದಲ್ಲಿ ಪ್ರಪ್ರಥಮವಾಗಿದೆ ಎಂದು ಕಾರಾಗೃಹ ಮುಖ್ಯ ಅಧೀಕ್ಷಕರು ತಿಳಿಸಿದ್ದಾರೆ. ಆರು ಸ್ವಚ್ಛತಾ ಜಾಗೃತಿ ಗೀತೆಗಳ ಮೂಲಕ ಹಸಿಕಸ

ಮತ್ತು ಒಣಕಸ ಬೇರ್ಪಡಿಸುವಿಕೆ, 'ಕಸದಿಂದ ರಸ" ಮಾದರಿಯಲ್ಲಿ ಕಾಂಪೋಸ್ಟ್ ಗೊಬ್ಬರ ತಯಾರಿಕೆ, ಬಯೋಗ್ಯಾಸ್ ಉತ್ಪಾದನ ಮೂಲಕ ಉದ್ಯೋಗ ಮತ್ತು ಆದಾಯವನ್ನು ಸಂಪಾದಿಸುವುದು. ಆರೋಗ್ಯ ರಕ್ಷಣೆ ಮತ್ತು ಪರಿಸರ ನೈರ್ಮಲ್ಯದ ಅರಿವು ಮೂಡಿಸುವುದು ಸೇರಿದಂತೆ ಸ್ವಸ್ಥ ಸಮಾಜ ನಿರ್ಮಾಣಕ್ಕೆ ಸ್ವಚ್ಛತೆಯೇ ಮೂಲ ತಳಹದಿ ಎಂಬ ಸಂದೇಶಗಳನ್ನು ಅಳವಡಿಸಲಾಗಿರುತ್ತದೆ.

<><><><>

ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ಸೂಕ್ಷ್ಮ ಆಹಾರ ಸಂಸ್ಕರಣಾ ಉದ್ದಿಮೆಗಳ ನಿಯಮಬದ್ಧ ಗೊಳಿಸುವಿಕೆ ಯೋಜನೆ ಕಳೆದ ೨೦೨೦ ರಿಂದ ಜಾರಿಯಲ್ಲಿದೆ. ಕೇಂದ್ರ ಸರ್ಕಾರದ ಆಹಾರ ಸಂಸ್ಕರಣಾ ಕೈಗಾರಿಕಾ ಸಚಿವಾಲಯ ನಡೆಸುತ್ತಿರುವ ಈ ಯೋಜನೆ, ಸಣ್ಣ ಆಹಾರ ವ್ಯಾಪಾರ ಮಾಡುತ್ತಿರುವ ಅಕ್ಕಿ ಗಿರಣಿ, ಮಸಾಲೆ ಪುಡಿ, ಸಿಹಿತಿಂಡಿಗಳು, ಹಾಲು ಉತ್ಪನ್ನ ಮಾಡುವವರಿಗೆ ಸಹಾಯ ಮಾಡುವುದರ ಮೂಲಕ ಅವರನ್ನು "ಅಸಂಘಟಿತ" ದಿಂದ "ಔಪಚಾರಿಕ" ವ್ಯವಹಾರಕ್ಕೆ ತರುವ ಉದ್ದೇಶವನ್ನು ಹೊಂದಿದೆ. ಈ ಯೋಜನೆ ಕುರಿತು ವಿಜಯಪುರ ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಸಂಗನಗೌಡ ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಸುಮಾರು ೪೭೯ ಕಿರು ಉದ್ದಿಮೆಗಳನ್ನು ಈಗಾಗಲೇ ಆರಂಭ ಮಾಡಿದ್ದೇವೆ. ಇದೊಂದು ಅತ್ಯಂತ ಉತ್ತಮ ಯೋಜನೆ ಎಂದರೆ ತಪ್ಪಾಗಲಾರದು ಎಂದು ಪಾಟೀಲ್ ತಿಳಿಸಿದ್ದಾರೆ.

<><><><>

ಪ್ರಕೃತಿ ವಿಕೋಪದಿಂದ ಜಾನುವಾರುಗಳನ್ನು ಕಳೆದುಕೊಂಡ ರೈತರಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಪರಿಹಾರ ಮೊತ್ತವನ್ನು ಅಗತ್ಯ ಕಾರ್ಯಗಳಿಗೆ ಬಳಸಿಕೊಂಡು ಕುಟುಂಬದ ಆರ್ಥಿಕ ಸ್ಥಿತಿಯನ್ನು ಬಲಪಡಿಸಿಕೊಳ್ಳಬೇಕು ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಸಲಹೆ ನೀಡಿದರು. ಯಾದಗಿರಿ ನಗರದಲ್ಲಿನ ಶಾಸಕರ ಕಚೇರಿಯಲ್ಲಿ ಪ್ರಕೃತಿ ವಿಕೋಪ ಪರಿಹಾರ ಯೋಜನೆಯಡಿ ಸಂತ್ರಸ್ತ ರೈತರಿಗೆ ಪರಿಹಾರ ಧನದ ಚೆಕ್‌ಗಳನ್ನು ವಿತರಿಸಿ ಮಾತನಾಡಿದ ಅವರು, ರೈತರು ಎದುರಿಸುತ್ತಿರುವ ಆರ್ಥಿಕ ಸಂಕಷ್ಟದ ಸಂದರ್ಭದಲ್ಲಿ ಸರ್ಕಾರದ ನೆರವು ಮಹತ್ವದ್ದಾಗಿದ್ದು, ಅದನ್ನು ವ್ಯರ್ಥ ವೆಚ್ಚಗಳಿಗೆ ಬಳಸದೇ ಕುಟುಂಬದ ಅವಶ್ಯಕತೆಗಳು, ಮಕ್ಕಳ ಶಿಕ್ಷಣ ಹಾಗೂ ಜೀವನೋಪಾಯದ ಅಭಿವೃದ್ಧಿಗೆ ವಿನಿಯೋಗಿಸಬೇಕು ಎಂದು ಹೇಳಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>